ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ತೋಟಗಾರಿಕೆ ಇಲಾಖೆಯಲ್ಲಿರುವ ವಿವಿಧ ಯೋಜನೆಗಳ ಕುರಿತು

ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

654 (817) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ತೋಟಗಾರಿಕೆ ಇಲಾಖೆಯಲ್ಲಿರುವ ವಿವಿಧ ಯೋಜನೆಗಳು ಯಾವುವು; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಇಲಾಖೆಯ ವಿವಿಧ ಯೋಜನೆ ಮತ್ತು ಲೆಕ್ಕಶೀರ್ಷಿಕೆಗಳ ಅಡಿಯಲ್ಲಿ ಮಂಜೂರು ಮಾಡಿರುವ ಮತ್ತು ಬಿಡುಗಡೆ ಮಾಡಿರುವ ಅನುದಾನ ಎಷ್ಟು; ಈ ಪೈಕಿ ಖರ್ಚಾದ ಮತ್ತು ಉಳಿದ ಹಣ ಎಷ್ಟು; (ವರ್ಷವಾರು, ಯೋಜನೆವಾರು, ಲೆಕ್ಕಶೀರ್ಷಿಕೆವಾರು, ಮಂಡ್ಯ ಜಿಲ್ಲೆಯ ತಾಲ್ಲೂಕುವಾರು ಅನುದಾನದ ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಇಲಾಖೆಯ ವಿವಿಧ ಯೋಜನೆಗಳ ಅಡಿಯಲ್ಲಿ ಪ್ರಯೋಜನ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು, ಫಲಾನುಭವಿಗಳವಾರು, ವರ್ಷವಾರು ಪೂರ್ಣ ವಿವರ ನೀಡುವುದು)

(ಈ) ಜಿಲ್ಲೆಯಲ್ಲಿ ಸರ್ಕಾರದ ವಿವಿಧ ಯೋಜನೆಗಳಿಗೆ ಪ್ರಸಕ್ತ ಸಾಲಿನಲ್ಲಿ ಹೆಚ್ಚುವರಿಯಾಗಿ ಅನುದಾನವನ್ನು ಮಂಜೂರು ಮಾಡಿ ಬಿಡುಗಡೆ ಮಾಡಲಾಗಿದೆಯೇ; (ವಿವರ ನೀಡುವುದು)

(ಉ) ಸರ್ಕಾರವು ಪ್ರಸಕ್ತ ಸಾಲಿನಲ್ಲಿ ಈಗಿರುವ ಯೋಜನೆಗಳ ಜೊತೆಯಲ್ಲಿ ರೈತರಿಗೆ ಅನುಕೂಲವಾಗುವ ಯಾವುದಾದರೂ ಹೊಸ ಯೋಜನೆಗಳನ್ನು ಜಾರಿಗೆ ತರಲಿದೆಯೇ? (ವಿವರ ನೀಡುವುದು)